# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಮಾಹಿತಿ ಹಕ್ಕು ವಿಭಾಗ/ಸುತ್ತೋಲೆ/01/2018-2019

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 02-05-2018

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಕಾಯ್ದೆ ಸೆಕ್ಷನ್ 2005ರ ಅನುಸಾರ ಮಾಹಿತಿ ವಿಚಾರಣೆಗೆ ದಾಖಲಾದ ಪ್ರಕರಣಗಳಿಗೆ ಸಂಬಂಧಪಟ್ಟ ವಿಭಾಗಗಳ ಸಾರ್ವಜನಿಕ/ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಖುದ್ದಾಗಿ ವಿಚಾರಣೆಗೆ ಹಾಜರಾಗುವ ಬಗ್ಗೆ.

ಉಲ್ಲೇಖ: ಕುಲಪತಿಗಳ ಟಿಪ್ಪಣಿ ಸಂಖ್ಯೆ: ಕುಪಅಕಾ/ಮಾಹಕಾ/2018, ದಿನಾಂಕ: 24-04-2018.

* * *

19 (3)ರ ಉಪಪ್ರಕರಣದ ಮೇರೆಗೆ ರಾಜ್ಯ ಮಾಹಿತಿ ಆಯೋಗಕ್ಕೆ ಅರ್ಜಿದಾರರು ಸಲ್ಲಿಸಿರುವ ಅಪೀಲಿನ ವಿಚಾರಣೆಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಆಯಾ ವಿಭಾಗಗಳ ವಿಷಯಕ್ಕೆ ಸಂಬಂಧಿಸಿದಂತೆ ಖುದ್ದಾಗಿ ವಿಚಾರಣೆಗೆ ಹಾಜರಾಗಿ ಪ್ರಕರಣವನ್ನು ಇತ್ಯರ್ಥಗೊಳಿಸುವುದು. ಹಾಗೂ ಯಾವುದೇ ಬೇರೆ ನೌಕರರನ್ನು/ತಾತ್ಕಾಲಿಕ ನೌಕರರನ್ನು ಆಯೋಗದ ವಿಚಾರಣೆಗೆ ನಿಯೋಜಿಸಬಾರದು ಎಂದು ಈ ಮೂಲಕ ಆದೇಶಿಸಲಾಗಿದೆ.

ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಸೂಕ್ತ ಕ್ರಮವಹಿಸಿ ನಿಗಧಿತ ಸಮಯದೊಳಗೆ ಸಂಬಂಧಪಟ್ಟ ವಿಭಾಗಗಳ ಅರ್ಜಿಗಳನ್ನು ವಿಚಾರಣೆಗೆ ಅವಕಾಶ ಕೊಡದಂತೆ ತಮ್ಮ ಹಂತದಲ್ಲಿಯೇ ಅರ್ಜಿದಾರರಿಗೆ ಮಾಹಿತಿ ಒದಗಿಸಿ ಅರ್ಜಿ ವಿಲೇವಾರಿ ಮಾಡುವಂತೆ ಆದೇಶಿಸಲಾಗಿದೆ.

**ಮಾಹಿತಿ ಹಕ್ಕು ಕಾಯ್ದೆಗೆ ಸಂಬಂಧಪಟ್ಟ ಎಲ್ಲಾ ಅರ್ಜಿ ಮತ್ತು ಪತ್ರ ವ್ಯವಹಾರಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಯು ತಮ್ಮ ಹೆಸರು, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಖಡ್ಡಾಯವಾಗಿ ನಮೂದಿಸತಕ್ಕದ್ದು.**

ಕುಲಸಚಿವರು 2/5/2018

2/5/2018

ಪ್ರತಿಗಳು:

1. ರಾಜ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ದೇವರಾಜ್ ಅರಸು ರಸ್ತೆ, ವಿಧಾನ ಸೌಧ, ಪಶ್ಚಿಮ ದ್ವಾರ 2ರ ಎದುರು, ಬೆಂಗಳೂರು-560 001.
2. ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು-560 056.
3. ಪ್ರಥಮ ಮೇಲ್ಮನವಿ ಪ್ರಾಧಿಕಾರ ಮತ್ತು ಕುಲಸಚಿವರು (ಆಡಳಿತ), ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು-560 056.
4. ಪ್ರಥಮ ಮೇಲ್ಮನವಿ ಪ್ರಾಧಿಕಾರ ಮತ್ತು ಕುಲಸಚಿವರು ಮೌಲ್ಯಮಾಪನ, (ಪರೀಕ್ಷಾ ವಿಭಾಗ), ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು-560 056.
5. ಪ್ರಥಮ ಮೇಲ್ಮನವಿ ಪ್ರಾಧಿಕಾರ ಮತ್ತು ವಿತ್ತಾಧಿಕಾರಿಗಳು (ಹಣಕಾಸು), ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು-560 056.
6. ಎಲ್ಲಾ ಸಾರ್ಜವಜನಿಕ ಮತ್ತು ಸಹಾಯಕ ಮಾಹಿತಿ ಅಧಿಕಾರಿ ಮತ್ತು ಉಪಕುಲಸಚಿವರು/ಸಹಾಯಕ ಕುಲಸಚಿವರು /ಮುಖ್ಯಸ್ಥರು/ಸಂಯೋಜನಾಧಿಕಾರಿಗಳು/ಪ್ರಾಂಶುಪಾಲರು/ಅಭಿಯಂತರರು, ಬೆಂಗಳೂರು ವಿಶ್ವವಿದ್ಯಾಲಯ ಬೆಂಗಳೂರು-560 056. (ಅಗತ್ಯ ಕ್ರಮ ಕೈಗೊಳ್ಳುವುದು.)
7. ಸಿಸ್ಟಮ್ ಅನಾಲಿಸ್ಟ್, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056. (ಅಂತರ್ಜಾಲದಲ್ಲಿ ಪ್ರಕಟಿಸಲು).